**ದಿನಾಂಕ 24.08.2019 ರಂದು 11.00 ಗಂಟೆಗೆ ವಿಧಾನ ಸೌಧದ ಕೊಠಡಿ ಸಂಖ್ಯೆ: 313ರಲ್ಲಿ ಕಲಬುರಗಿ ವಿಮಾನ ನಿಲ್ದಾಣದ ಒಡಂಬಡಿಕೆ ಸಹಿ ಬಗ್ಗೆ ಸಂಕ್ಷಿಪ್ತ ಟಿಪ್ಪಣಿ**

ಕಲಬುರಗಿ ವಿಮಾನ ನಿಲ್ದಾಣ ಅಭಿವೃದ್ಧಿ ಯೋಜನೆಗೆ ರಾಜ್ಯ ಸರ್ಕಾರದ ವತಿಯಿಂದ ದಿನಾಂಕ 27.03.2007ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಯಿತು. ಈ ಯೋಜನೆಯನ್ನು 742 ಎಕರೆ ಜಮೀನಿನಲ್ಲಿ ಸುಮಾರು ರೂ.22.00 ಕೋಟಿಗಳ ಭೂಸ್ವಾಧೀನ ವೆಚ್ಚ ಹಾಗೂ ರೂ.208 ಕೋಟಿಗಳ ನಿರ್ಮಾಣ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗಿದ್ದು, ಇದುವರೆಗೆ ಒಟ್ಟಾರೆ ರೂ.230 ಕೋಟಿಗಳನ್ನು ಕಲಬುರಗಿ ವಿಮಾನ ನಿಲ್ದಾಣದ ಅಭಿವೃದ್ಧಿ ಮತ್ತು ನಿರ್ಮಾಣಕ್ಕಾಗಿ ವೆಚ್ಚ ಮಾಡಲಾಗಿದೆ. ವಿಮಾನ ನಿಲ್ದಾಣದ ಅಭಿವೃದ್ಧಿ ಕಾಮಗಾರಿಯನ್ನು ಸರ್ಕಾರದ ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿ ಮೆಃ ರೈಟ್ಸ್ ಪ್ರೈ. ಲಿಮಿಟೆಡ್ ಇವರನ್ನು ತಾಂತ್ರಿಕ ಸಲಹೆಗಾರರನ್ನಾಗಿ ನೇಮಿಸಲಾಗಿತ್ತು. ಪ್ರಸ್ತುತ ಸದರಿ ವಿಮಾನ ನಿಲ್ದಾಣದ ಕಾಮಗಾರಿಗಳು ಪೂರ್ಣಗೊಂಡಿದ್ದು, 2018ರ ಆಗಸ್ಟ್ ತಿಂಗಳಿನಲ್ಲಿ ಪ್ರಾಯೋಗಿಕ ವಿಮಾನ ಹಾರಾಟವನ್ನು ಕೈಗೊಳ್ಳಲಾಗಿರುತ್ತದೆ.

ಕಲಬುರಗಿ ವಿಮಾನ ನಿಲ್ದಾಣವನ್ನು ಕೇಂದ್ರ ಸರ್ಕಾರದ ಪ್ರಾದೇಶಿಕ ಸಂಪರ್ಕ ಯೋಜನೆ – 3.0 (RCS–3.0) ಅಡಿಯಲ್ಲಿ ಪ್ರಾದೇಶಿಕ ವಿಮಾನಯಾನ ಕಾರ್ಯಾಚರಣೆಗೆ ಆಯ್ಕೆಯಾಗಿದ್ದು, ಮೆಃ ಅಲೈಯನ್ಸ್ ಏರ್ ಮತ್ತು ಮೆಃ ಗೋದಾವತ್ ಏರ್ ಪ್ರೈ. ಲಿಮಿಟೆಡ್ ಇವರು ವಿಮಾನಯಾನ ಕಾರ್ಯಾಚರಣೆ ಒದಗಿಸಲು ಆಯ್ಕೆಯಾಗಿರುತ್ತಾರೆ. ಹಾಲಿಯಲ್ಲಿ ಕಲಬುರಗಿ ವಿಮಾನ ನಿಲ್ದಾಣದಿಂದ ಕಾರ್ಯಾಚರಣೆಗಾಗಿ ಬೆಂಗಳೂರು–ಕಲಬುರಗಿ–ಬೆಂಗಳೂರು, ಕಲಬುರಗಿ–ಹಿಂಡನ್–ಕಲಬುರಗಿ, ಕಲಬುರಗಿ–ತಿರುಪತಿ–ಕಲಬುರಗಿ ಮಾರ್ಗಗಳು ಒಳಗೊಂಡಿರುತ್ತದೆ.

ಕಲಬುರಗಿ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರಕ್ಕೆ (ಎಎಐ) ವಹಿಸಲು ದಿನಾಂಕ 24.08.2019 ರಂದು ರಾಜ್ಯ ಸರ್ಕಾರದ ಪರವಾಗಿ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ನಿಗಮ ನಿಯಮಿತ (ಕೆ.ಎಸ್.ಐ.ಐ.ಡಿ.ಸಿ) ಹಾಗೂ ಕೇಂದ್ರ ನಾಗರೀಕ ವಿಮಾನಯಾನ ಮಂತ್ರಾಲಯದ ಪರವಾಗಿ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಇವರೊಂದಿಗೆ ಒಪ್ಪಂದವನ್ನು ಸಹಿ ಮಾಡಲಾಗಿದೆ. ಕೇಂದ್ರ ಸರ್ಕಾರದ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದಿಂದ ಕಲಬುರಗಿ ವಿಮಾನ ನಿಲ್ದಾಣದ ಅಭಿವೃದ್ಧಿ, ಕಾರ್ಯಾಚರಣೆ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲಾಗುವುದರಿಂದ, ಕರ್ನಾಟಕ ರಾಜ್ಯದ ಹಿಂದುಳಿದ ಪ್ರದೇಶವಾದ ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ದೇಶದ ಹಾಗೂ ರಾಜ್ಯದ ರಾಜಧಾನಿಯೊಂದಿಗೆ ವಿಮಾನಯಾನ ಸಂಪರ್ಕವನ್ನು ಕಲ್ಪಿಸುವುದಕ್ಕೆ ಅನುಕೂಲಕರವಾಗುವುದಲ್ಲದೇ, ಹೈದ್ರಾಬಾದ್–ಕರ್ನಾಟಕ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಸಹಾಯಕವಾಗಲಿದೆ.

************